**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ: ಸಿ8[7] ಶಾಶಿಅ/ಮಾನ್ಯತೆ ನವೀಕರಣ/01/2017-18 ದಿನಾಂಕ: 03.08.2017

**ಸುತ್ತೋಲೆ**

ವಿಷಯ: ರಾಜ್ಯದಲ್ಲಿನ ಖಾಸಗಿ ಅನುದಾನ ರಹಿತ/ಸಹಿತ ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ/ಹಾಜರಾತಿ ಕನಿಷ್ಠಕ್ಕಿಂತ ಕಡಿಮೆ ಇರುವ ಶಾಲೆಗಳಿಗೆ ಮಾನ್ಯತೆ ನವೀಕರಿಸುವ ಬಗ್ಗೆ.

ಉಲ್ಲೇಖ:1. ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಪ್ರಾಥಮಿಕ & ಪ್ರೌಢಶಿಕ್ಷಣ ಸಂಸ್ಥೆಗಳ) ಮಾನ್ಯತೆ ನಿಯಮಗಳು-1999,ನಿಯಮ-(4)(1)(ಕೆ).

2. ಸರ್ಕಾರದ ಆದೇಶ ಸಂಖ್ಯೆ: ಇಡಿ 324 ಎಸ್‌ಎಲ್‌ಬಿ 2015, ದಿಃ 29.10.2015.

3. ಈ ಕಚೇರಿಯ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 27.11.2015.

4. ಸರ್ಕಾರದ ಸುತ್ತೋಲೆ ಸಂಖ್ಯೆ ದಿನಾಂಕಃ 02.11.2006.

5. ಕಚೇರಿಯ ಸುತ್ತೋಲೆ ಸಂಖ್ಯೆ: ಸಿ8(7)ಶಾಶಿಅ/ಅಧಿಕ ವಿಭಾಗ/2001-02, ದಿ: 17.08.2002.

6. ಕರ್ನಾಟಕ ಅನುದಾನ ರಹಿತ ಶಾಲೆಗಳ ಆಡಳಿತ ಮಂಡಳಿಗಳ ಸಂಘ(ರಿ) ಬೆಂಗಳೂರು, ಇವರ ಮನವಿ ದಿನಾಂಕ: 01.08.2017

7. ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 19.08.2016

&&&&&&

ರಾಜ್ಯದಲ್ಲಿನ ಖಾಸಗಿ ಅನುದಾನ ರಹಿತ/ಸಹಿತ ಪ್ರೌಢಶಾಲೆಗಳಿಗೆ ಮಾನ್ಯತೆ ನವೀಕರಣ ಮಾಡುವ ವಿಧಾನವಾಗಿ ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಪ್ರಾಥಮಿಕ/ಪ್ರೌಢಶಿಕ್ಷಣ) ಮಾನ್ಯತೆ ನಿಯಮಗಳು-1999, ನಿಯಮ 3(1)ರಂತೆ ಖಾಸಗಿ ಶಿಕ್ಷಣ ಸಂಸ್ಥೆಗಳು ನಿಗಧಿತ ಕಾಲಕ್ಕೆ ಮಾನ್ಯತೆ ನವೀಕರಣ ಪಡೆಯುವುದು ಕಡ್ಡಾಯವಾಗಿರುತ್ತದೆ. ಮತ್ತು ನಿಯಮ(4)(1)(ಕೆ) ರಂತೆ ವಿದ್ಯಾರ್ಥಿಗಳು ಕನಿಷ್ಠ 25 ಹಾಜರಾತಿಯನ್ನು ಕಾಯ್ದುಕೊಳ್ಳುವುದು ಸಹ ಕಡ್ಡಾಯವಾಗಿರುತ್ತದೆ.

ಹಾಜರಾತಿ ಕೊರತೆ ಇರುವ ಶಾಲೆಗಳಿಗೆ ಅನುದಾನ ಸಂಹಿತೆ-16(11)ರಲ್ಲಿ ವಿದ್ಯಾರ್ಥಿಗಳ ಹಾಜರಾತಿ ಕೊರತೆ ಮನ್ನಾ ಮಾಡಲು ವಿಶೇಷ ಸಂಧರ್ಭದಲ್ಲಿ ಒಂದು ಬಾರಿಗೆ ಅವಕಾಶ ಕಲ್ಪಿಸಲಾಗಿದೆ. ಇದರಂತೆ ಒಂದು ಬಾರಿಗೆ ಹಾಜರಾತಿ ಮನ್ನಾ ಮಾಡಲು ಕ್ರಮವಹಿಸಲಾಗುತ್ತಿದೆ. ಈಗಲೂ ಕೆಲವು ಅನುದಾನ ರಹಿತ/ಸಹಿತ ಪ್ರೌಢಶಾಲೆಗಳಿಗೆ ಮಾನ್ಯತೆ ನವೀಕರಣ ಪಡೆಯದೆ ಇರುವುದು ಇಲಾಖೆಯ ಗಮನಕ್ಕೆ ಬಂದಿದ್ದು, ಇಂತಹ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಕಷ್ಟ ಸಾಧ್ಯವಾಗಿರುತ್ತದೆ.

ಈ ಸಂಬಂಧ ಉಲ್ಲೇಖ(7)ರ ಈ ಕಛೇರಿಯ ಸುತ್ತೋಲೆಯಲ್ಲಿ ಖಾಸಗಿ ಅನುದಾನ ರಹಿತ ಪ್ರೌಢಶಾಲೆಗಳಲ್ಲಿನ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಪರೀಕ್ಷೆಯಿಂದ ವಂಚಿತರಾಗಬಾರದೆಂಬ ದೃಷ್ಟಿಯಿಂದ ಮಾನ್ಯತೆ ನಿಯಮಗಳ ಎಲ್ಲಾ ಷರತ್ತುಗಳನ್ನು ಪೂರೈಸಿರುವುದನ್ನು ಖಚಿತ ಪಡಿಸಿಕೊಂಡು ವಿದ್ಯಾರ್ಥಿಗಳ ಕನಿಷ್ಠ

25 ಸಂಖ್ಯೆಗೆ ವಿನಾಯಿತಿ ನೀಡಿ 2017-18ನೇ ಸಾಲಿಗೆ ಮಾತ್ರ ಅನ್ವಯಿಸುವಂತೆ ಮಾನ್ಯತೆ ನವೀಕರಣ ಮಾಡಲು ಅವಕಾಶ ಕಲ್ಪಿಸಲಾಗಿದೆ.

Kiran Raghupathi
Vice President KSPSTA

ಕರ್ನಾಟಕ ಶಿಕ್ಷಣ ಕಾಯ್ದೆ 1983ರ ನಿಯಮ 36ರಡಿಯಲ್ಲಿ ಖಾಸಗಿ ಅನುದಾನಿತ/ಅನುದಾನ ರಹಿತ ಪ್ರೌಢಶಾಲೆಗಳ ಮಾನ್ಯತೆ ನವೀಕರಣ ಪ್ರಾಧಿಕಾರಿಗಳು ಸಂಬಂಧಪಟ್ಟ ಆಯಾ ಜಿಲ್ಲಾ ಉಪನಿರ್ದೇಶಕರಾಗಿರುತ್ತಾರೆ. ಈ ಹಿನ್ನೆಲೆಯಲ್ಲಿ ಜಿಲ್ಲಾ ಉಪನಿರ್ದೇಶಕರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಜಿಲ್ಲಾ ಮಟ್ಟದಲ್ಲಿ ಒಂದು ಸಭೆಯನ್ನು ಏರ್ಪಡಿಸಿ, ಮಾಹಿತಿ ಪಡೆದು ಎಲ್ಲಾ ಶಾಲೆಗಳ ಮಾನ್ಯತೆಯನ್ನು ನಿಯಮಾನುಸಾರ ನೀಡಲು ಕ್ರಮವಹಿಸುವುದು.

ಜಿಲ್ಲಾ ಮಟ್ಟದಲ್ಲಿನ ಖಾಸಗಿ ಅನುದಾನಿತ/ಅನುದಾನ ಸಹಿತ ಪ್ರೌಢಶಾಲೆಗಳಲ್ಲಿ ಮಾನ್ಯತೆ ನವೀಕರಣ ಆಗದೇ ಇರುವ ಶಾಲೆಗಳನ್ನು ಪಟ್ಟಿ ಮಾಡಿ ಅಂತಹ ಪ್ರೌಢಶಾಲೆಗಳಿಗೆ ಮಾನ್ಯತೆ ನವೀಕರಣವನ್ನು ದಿನಾಂಕ: 20.10.2017ರೊಳಗೆ ಕಡ್ಡಾಯವಾಗಿ ಮಾಡತಕ್ಕದ್ದು. ಈ ದಿನಾಂಕದ ನಂತರ ಯಾವುದೇ ಪ್ರೌಢಶಾಲೆಗಳು ಮಾನ್ಯತೆ ನವೀಕರಣವಾಗದೇ ಇರುವುದು ಇಲಾಖೆಯ ಗಮನಕ್ಕೆ ಬಂದಲ್ಲಿ, ಅಂತಹ ಜಿಲ್ಲಾ ಉಪನಿರ್ದೇಶಕರ ಮೇಲೆ ನಿಯಮಾನುಸಾರ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು. ಈ ರೀತಿ ಕೈಗೊಂಡ ಕ್ರಮದ ಬಗ್ಗೆ ವರದಿಯನ್ನು ಈ ಪತ್ರದೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಪ್ರತ್ಯೇಕವಾಗಿ ಸಲ್ಲಿಸುವುದು.

ಎಸ್.ಎಸ್.ಎಲ್.ಸಿ 2018ರ ಪರೀಕ್ಷಾ ಶುಲ್ಕ ಪಾವತಿಗೆ ಈಗಾಗಲೇ ನಿಗದಿಪಡಿಸಿದ ದಿನಾಂಕಗಳಲ್ಲಿ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಪಾವತಿಸದೇ ಇದ್ದಲ್ಲಿ, ಅಂತಹವರಿಂದ ಪರೀಕ್ಷಾ ಶುಲ್ಕವನ್ನು ದಿನಾಂಕ: 26.10.2017ರೊಳಗೆ ಪಡೆದು ನಾಮಿನಲ್ ರೋಲ್ ಪ್ರಸ್ತಾವನೆಯನ್ನು ದಿನಾಂಕ: 28.10.2017ರೊಳಗೆ ಮಂಡಳಿಗೆ ಸಲ್ಲಿಸಲು ರಾಜ್ಯದ ಎಲ್ಲಾ ಮುಖ್ಯ ಶಿಕ್ಷಕರಿಗೆ ತಿಳಿಸಲು ಆಯಾ ಜಿಲ್ಲಾ ಉಪ ನಿರ್ದೇಶಕರು ಸೂಕ್ತ ಕ್ರಮ ಕೈಗೊಳ್ಳತಕ್ಕದ್ದು.

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

ಪ್ರತಿಯನ್ನು:

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಗುಲ್ಬರ್ಗಾ ರವರಿಗೆ ಕಳುಹಿಸುತ್ತಾ, ಮಾಹಿತಿಯನ್ನು ಕ್ರೋಢೀಕರಿಸಿ ಸಲ್ಲಿಸಲು ಕೋರಿದೆ.
2. ನಿರ್ದೇಶಕರು, ಅಪರ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಗುಲ್ಬರ್ಗಾ ಇವರಿಗೆ ಕಳುಹಿಸುತ್ತಾ, ನಿಮ್ಮ ವ್ಯಾಪ್ತಿಯಲ್ಲಿ ಬರುವ ಶಾಲೆಗಳ ಮಾನ್ಯತೆ ನವೀಕರಣದ ಬಗ್ಗೆ ಕ್ರಮ ಕೈಗೊಂಡು ನಿಗಧಿತ ನಮೂನೆಯಲ್ಲಿ ಮಾಹಿತಿ ನೀಡಲು ಕ್ರಮ ವಹಿಸಲು ಕೋರಿದೆ.
3. ನಿರ್ದೇಶಕರು(ಪರೀಕ್ಷೆಗಳು) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
4. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರುಗಳಿಗೆ ಸೂಕ್ತ ಕ್ರಮಕ್ಕಾಗಿ.
5. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
6. ಕಛೇರಿ ಪ್ರತಿ.